DECEMBER 30,2024
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ವಿಶ್ವ ವಿಖ್ಯಾತ ಬಾಹ್ಯಕಾಶ ವಿಜ್ಞಾನಿ ವಿಕ್ರಂ ಸಾರಾಭಾಯಿ ಅವರ ಪುಣ್ಯತಿಥಿ ಇಂದು. ಭಾರತದ ಬಾಹ್ಯಾಕಾಶ ಯೋಜನೆಗಳ ರೂವಾರಿ ಸಾರಾಭಾಯಿ ಅವರಿಗೆ, ಪದ್ಮಭೂಷಣ ಹಾಗೂ ಪದ್ಮವಿಭೂಷಣ ಪುರಸ್ಕಾರ ಸಂದಿವೆ. ಖಭೌತ ವಿಜ್ಞಾನಿ ವಿಕ್ರಂ ಸಾರಾಭಾಯಿ ಅವರ ಪುಣ್ಯತಿಥಿಯಂದು, ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ, ಪ್ರಲ್ಹಾದ ಜೋಶಿ ತಮ್ಮ ಎಕ್ಸ್ ಖಾತೆಯಲ್ಲಿ ಗೌರವ ನಮನ ಸಲ್ಲಿಸಿದ್ದಾರೆ.

<><><>

'ಮನುಜ ಮತ ವಿಶ್ವ ಪಥ' ಸಂದೇಶ ಸಾರಿದ, ರಾಷ್ಟ್ರಕವಿ ಕುವೆಂಪು ಅವರ, 120ನೇ ಜನ್ಮದಿನದ ಅಂಗವಾಗಿ, ವಿಶ್ವ ಮಾನವ ದಿನಾಚರಣೆ, ಉತ್ತರಕನ್ನಡ ಜಿಲ್ಲೆ, ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸರಳವಾಗಿ ಜರುಗಿತು. ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಗದಗ ಜಿಲ್ಲಾಡಳಿತ ಸಭಾಭವನದಲ್ಲಿ ಜರುಗಿದ, ವಿಶ್ವ ಮಾನವ ದಿನಾಚರಣೆ ಕಾರ್ಯಕ್ರಮದಲ್ಲಿ, ನರಗುಂದ ಶಾಸಕ ಸಿ.ಸಿ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ ಸಂಕನೂರು ಅವರು, ರಾಷ್ಟ್ರಕವಿ ಕುವೆಂಪು ಅವರ ಭಾವಚಿತ್ರಕ್ಕೆ ಗೌರವಾರ್ಪಿಸಿದರು.

<><><>

ಕೊಪ್ಪಳ ನಗರದಲ್ಲಿ ಮಾನಸ 2024 ರಾಷ್ಟ್ರೀಯ ಆಯುರ್ವೇದ ಸಮ್ಮೇಳನ ಗವಿಸಿದ್ದೇಶ್ವರ ಆಯುರ್ವೇದ ಮಹಾವಿದ್ಯಾಲಯದಲ್ಲಿ ಆಯೋಜಿತವಾಗಿದೆ. ಎರಡು ದಿನಗಳ ರಾಷ್ಟ್ರೀಯ ಆಯುರ್ವೇದ ಸಮ್ಮೇಳನದ ವಿಚಾರಗೋಷ್ಠಿಯಲ್ಲಿ ಪಾಲ್ಗೊಂಡ, ಧಾರವಾಡ ಡಿಮ್ಹಾನ್ಸ್ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕಿ ಡಾಕ್ಟರ್ ಸ್ವಪ್ನಾ ಪಾಂಡುರಂಗಿ ಪ್ರದೇಶ ಸಮಾಚಾರದೊಂದಿಗೆ ಮಾನಸಿಕ ಆರೋಗ್ಯ ಜಾಗೃತಿ ಕುರಿತಂತೆ ಮಾಹಿತಿ ಹಂಚಿಕೊಂಡಿದ್ದಾರೆ.

ಬೈಟ್: ಡಾಕ್ಟರ್ ಸ್ವಪ್ನಾ ಪಾಂಡುರಂಗಿ 30 ಸೆಕೆಂದುಗಳು

<><><>

ಧಾರವಾಡದ ಕಾಸ್ಮೊಸ್ ಕ್ಲಬ್ ಕ್ರೀಡೆ, ಮನೋರಂಜನೆ ಜೊತೆಗೆ, ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಕೊಂಡು, ಉತ್ತಮ ಕಾರ್ಯ ನಿರ್ವಹಿಸುತ್ತಿದೆ ಎಂದು, ವಿಧಾನಸಭೆ ವಿಪಕ್ಷ ಉಪ ನಾಯಕ ಅರವಿಂದ ಬೆಲ್ಲದ, ಶ್ಲಾಘಿಸಿದ್ದಾರೆ. ಧಾರವಾಡದ, ವಿದ್ಯಾಗಿರಿಯ ಜೆ.ಎಸ್.ಎಸ್. ಮಹಾವಿದ್ಯಾಲಯದ, ಸನ್ನಿಧಿ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ, ಕಾಸ್ಮೊಸ್ ಕ್ಲಬ್ ಶತಮಾನೋತ್ಸವ ಸಮಾರಂಭದಲ್ಲಿ, ಅವರು ಮಾತನಾಡಿದರು. ಈ ಕ್ಲಬ್ ನಲ್ಲಿ ತರಬೇತಿ ಪಡೆದ ಅನೇಕ ಕ್ರೀಡಾಪಟುಗಳು ಉನ್ನತ ಮಟ್ಟದ ಸಾಧನೆ ಮಾಡಿದ್ದಾರೆ. ಬ್ರಿಟಿಷರ ಕಾಲದಲ್ಲಿ ಸ್ಥಾಪನೆಯಾಗಿರುವ ಈ ಕ್ಲಬ್ ಅಂದಿನಿಂದಲೂ ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ ಎಂದರು.

<><><>

ಸಂಸ್ಕೃತಿ, ಆಚಾರ–ವಿಚಾರ, ಪದ್ಧತಿಗಳನ್ನು ಪಾಲಿಸುವಂತಾಗಬೇಕು ಎಂಬ, ಒಕ್ಕೊರಲ ಅಭಿಪ್ರಾಯ, ತೃತೀಯ ವಿಶ್ವ ಹವ್ಯಕ ಸಮ್ಮೇಳನದ ಸಮಾರೋಪ ಹಾಗೂ ಸಹಸ್ರಚಂದ್ರ ಸ್ಮರಣ ಸಂಚಿಕೆ ಲೋಕಾರ್ಪಣೆ ಸಮಾರಂಭದಲ್ಲಿ ವ್ಯಕ್ತವಾಗಿದೆ. ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಸಮ್ಮೇಳನದ ಸಮಾರೋಪದಲ್ಲಿ ಪಾಲ್ಗೊಂಡಿದ್ದ ಸ್ವಾಮೀಜಿಗಳು, ಸಂಸ್ಕೃತಿ ಮತ್ತು ಭಾರತೀಯ ಪರಂಪರೆಯ ಪಾಲನೆ ಬಗ್ಗೆ ಹವ್ಯಕ ಸಮುದಾಯಕ್ಕೆ ಸಂದೇಶ ನೀಡಿದರು. ವರ್ಚುವಲ್ ಮಾಧ್ಯಮದ ಮೂಲಕ ಪಾಲ್ಗೊಂಡಿದ್ದ, ಕಂಚಿ ಕಾಮಕೋಟಿ ಪೀಠದ ಶಂಕರವಿಜಯೇಂದ್ರ ಸರಸ್ವತಿ ಸ್ವಾಮೀಜಿ ಮಾತನಾಡಿ, ಧರ್ಮ ಸಂರಕ್ಷಣೆ ಆಗದಿದ್ದರೆ ವಿಶ್ವಶಾಂತಿ ಅಸಾಧ್ಯ ಎಂದರು.

<><><>

ಭಾರತದ ಚೆಸ್ ಗ್ರ್ಯಾಂಡ್ ಮಾಸ್ಟರ್ ಕೊನೇರು ಹಂಪಿ ಅವರು, ಫಿಡೆ ಮಹಿಳಾ ವಿಶ್ವ ರ್‍ಯಾಪಿಡ್ ಚೆಸ್ ಚಾಂಪಿಯನ್ ಶಿಪ್‌ನಲ್ಲಿ, ವಿಜಯ ಸಾಧಿಸಿದ್ದಾರೆ. ಭಾರತದ ಅಗ್ರಮಾನ್ಯ ಆಟಗಾರ್ತಿ, ಕೊನೆಯ ಸುತ್ತಿನಲ್ಲಿ ಇಂಡೊನೇಷ್ಯಾದ ಐರಿನ್ ಸುಕಂದರ್ ಅವರನ್ನು ಪರಾಭವಗೊಳಿಸಿ, ಎರಡನೇ ಬಾರಿ ಈ ಚಾಂಪಿಯನ್‌ಶಿಪ್ ಗೆದ್ದಿದ್ದಾರೆ. ಜಾರ್ಜಿಯಾದಲ್ಲಿ 2019 ರಲ್ಲಿ ನಡೆದ ಚಾಂಪಿಯನ್ ಶಿಪ್ ನಲ್ಲಿ ಕೊನೇರು ಹಂಪಿ ಅವರು. ಮೊದಲ ಬಾರಿ ಈ ಪ್ರಶಸ್ತಿ ಗೆದ್ದಿದ್ದರು. ಚೀನಾದ, ಜು ವೆನ್ ಜುನ್ ಅವರಂತೆ, ಈ ಪ್ರಶಸ್ತಿಯನ್ನು ಎರಡು ಸಲ ಗೆದ್ದ ಏಕಮಾತ್ರ ಆಟಗಾರ್ತಿ ಎಂಬ ಗೌರವ, ಹಂಪಿ ಗಳಿಸಿದ್ದಾರೆ.

<><><>

ಹಾವೇರಿಯಲ್ಲಿ ಇಂದಿನಿಂದ ಜನವರಿ 15ರ ವರೆಗೆ, ಪ್ರಾಕೃತಿಕ ವಿಕೋಪ ನಿರ್ವಹಣೆ ತರಬೇತಿ ಹಾಗೂ ಅಣುಕು ಪ್ರದರ್ಶನವನ್ನು, ರಾಷ್ಟ್ರೀಯ ಪ್ರಾಕೃತಿಕ ವಿಕೋಪ ನಿರ್ವಹಣೆ ತಂಡ ನಡೆಸಿಕೊಡಲಿದೆ.

<><><>

ಹೊಸ ವರ್ಷಾಚರಣೆ ಹಿನ್ನಲೆಯಲ್ಲಿ, ಮಂಡ್ಯ ಜಿಲ್ಲೆಯ ಪ್ರವಾಸಿ ತಾಣಗಳಾದ ಮಳವಳ್ಳಿ ತಾಲೂಕಿನ ಮುತ್ತತ್ತಿ, ಭೀಮೇಶ್ವರಿ ಫಿಶಿಂಗ್ ಕ್ಯಾಂಪ್ ಹಾಗೂ ಶ್ರೀರಂಗಪಟ್ಟಣ ತಾಲೂಕಿನ ಬಲಮುರಿ, ಕಾವೇರಿ ನದಿ ಹಿನ್ನೀರಿನ ಪ್ರದೇಶದಲ್ಲಿ ಪ್ರವಾಸಿಗರ ಪ್ರವೇಶಕ್ಕೆ ನಿರ್ಬಂಧ ವಿಧಿಸಲಾಗಿದೆ.

ನಾಳೆ ಸಂಜೆ ಐದು ಗಂಟೆಯಿಂದ ಜನವರಿ 2, ಬೆಳಿಗ್ಗೆ 6 ಗಂಟೆಯವರೆಗೆ ಪ್ರವಾಸಿಗರ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ ಎಂದು ಸ್ಥಳೀಯ ತಹಸೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>